ಪುಸ್ತಕ ಪ್ರಕಾಶನ

356 (140) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್): ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕನ್ನಡ ಪುಸ್ತಕ ಪ್ರಕಾಶನ ಸಂಸ್ಥೆಗಳು ಪುಸ್ತಕಗಳ ಮುದ್ರಣಕ್ಕಾಗಿ ಬಳಸುವ ಕಾಗದವನ್ನು ರಿಯಾಯಿತಿ ದರದಲ್ಲಿ ಒದಗಿಸಬೇಕೆಂಬ ಪ್ರಸ್ತಾವನೆಯನ್ನು ಸರ್ಕಾರದ ಮುಂದೆ ಇಟ್ಟಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಪುಸ್ತಕ ಪ್ರಕಾಶಕರನ್ನು ವ್ಯವಸ್ಥಾಪಕರುಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಪುಸ್ತಕ ಪ್ರಕಾಶನ ಕ್ಷೇತ್ರವನ್ನು ಉದ್ಯಮವೆಂದು ಪರಿಗಣಿಸಲು ಆಲೋಚಿಸಿದೆಯೇ;

ಈ) ಹಾಗಿದ್ದಲ್ಲಿ, ಪುಸ್ತಕ ಪ್ರಕಾಶನವನ್ನು ಉದ್ಯಮ ಎಂದು ಸರ್ಕಾರ ಘೋಷಿಸಲು ಕೈಗೊಂಡ ಕ್ರಮಗಳೇನು?

ಶ್ರೀ ಗೋವಿಂದ ಎಂ. ಕಾರಜೋಳ (ಕನ್ನಡ ಮತ್ತು ಸಂಸ್ಕೃತಿ, ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು):

ಅ) ಹೌದು.

ಆ) ಪರಿಶೀಲನೆಯಲ್ಲಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಬೀಡಿ ಕಾರ್ಮಿಕರು

357 (141) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್): ಮಾನ್ಯ ಕಾರ್ಮಿಕ ಮತ್ತು ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಬೀಡಿ ಕಾರ್ಮಿಕರ ಸಂಖ್ಯೆ ಎಷ್ಟು;

ಆ) ಈ ಬೀಡಿ ಕಾರ್ಮಿಕರು ಕನಿಷ್ಟ ಕೂಲಿ, ವಸತಿ ಸೌಲಭ್ಯ, ಬಿ.ಪಿ.ಎಲ್. ಕಾರ್ಡ್ ಹಾಗೂ ಕಾರ್ಮಿಕ ಕಾನೂನು ಜಾರಿಗೊಳಿಸುವ ಬೇಡಿಕೆಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಈ) ಕೇಂದ್ರ ಸರ್ಕಾರದಿಂದ ಈ ಬೀಡಿ ಕಾರ್ಮಿಕರಿಗೆ ಸಿಗಬೇಕಾದ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಮತ್ತು ರೇಷ್ಮೆ ಸಚಿವರು):

ಅ) ರಾಜ್ಯದಲ್ಲಿ ಡಿಸೆಂಬರ್–2010ರ ಅಂತ್ಯಕ್ಕೆ ನೋಂದಾಯಿತ ಬೀಡಿ ಕಾರ್ಮಿಕರ ಸಂಖ್ಯೆ 2,48,292 ಇರುತ್ತದೆ.

ಆ) ಹೌದು. ಕೆಲವು ಸಂಘದವರು ಕೇಂದ್ರ ಸರ್ಕಾರವು ನೀಡುತ್ತಿರುವ ಸಹಾಯ ಧನವನ್ನು ಹೆಚ್ಚಿಸಬೇಕೆಂದು ಹಾಗೂ ರಾಜ್ಯ ಸರ್ಕಾರವು ನೀಡುತ್ತಿರುವ ಸಾಲದ ಜೊತೆಗೆ ಸಹಾಯ ಧನವನ್ನು ನೀಡಬೇಕೆಂದು ಮನವಿ ಸಲ್ಲಿಸಿದ್ದಾರೆ.

ಇ) ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಬೀಡಿ ಕಾರ್ಮಿಕರ ವಸತಿಗಾಗಿ ನೀಡುವ ಸಹಾಯಧನ, ಆರೋಗ್ಯ ಸೌಲಭ್ಯ, ವಿದ್ಯಾರ್ಥಿವೇತನ ಮುಂತಾದ ಕಲ್ಯಾಣ ಯೋಜನೆಗಳನ್ನು ಕೇಂದ್ರ ಸರ್ಕಾರ ಅನುಷ್ಠಾನಗೊಳಿಸುತ್ತಿದೆ.

ಕಲ್ಲುಗಣಿಗಾರಿಕೆ ಪರವಾನಿಗೆ

359 (358) ಶ್ರೀ ರಮೇಶ್ ಬಂಡಿಸಿದ್ದಗೌಡ ಎ.ಬಿ. (ಶ್ರೀರಂಗಪಟ್ಟಣ): ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅರಣ್ಯ ಇಲಾಖೆಯವರು ಎನ್.ಓ.ಸಿ. ಕೊಟ್ಟು ಗಣಿಗಾರಿಕೆ ಪರವಾನಿಗೆ ನೀಡಿದ್ದರೂ ಪರವಾನಿಗೆಯನ್ನು ನವೀಕರಣ ಮಾಡಿ ಕೊಡಲು ಅರಣ್ಯ ಇಲಾಖೆಯವರು ತಕರಾರು ತೆಗೆದು ಸಣ್ಣಪುಟ್ಟ ಗಣಿಗಾರಿಕೆ ಮಾಡುವ ರೈತರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ರೈತರಿಗೆ ಪರವಾನಿಗೆ ನವೀಕರಣ ಮಾಡಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಸಚಿವರು):

ಅ) ಮೈಸೂರು ವೃತ್ತ ವ್ಯಾಪ್ತಿಯ ಮಂಡ್ಯ ವಿಭಾಗದ ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಮೈಸೂರು ವೃತ್ತದ ಮಂಡ್ಯ ವಿಭಾಗದಲ್ಲಿ ರೈತರು ಗಣಿಗಾರಿಕೆಗೆ ಅರ್ಜಿ ಸಲ್ಲಿಸಿರುವುದಿಲ್ಲ. ಶ್ರೀರಂಗಪಟ್ಟಣ ವಲಯದಲ್ಲಿ ಕಲ್ಲು ಗಣಿಗಾರಿಕೆ ನಡೆಸಲು ಅರಣ್ಯ ಇಲಾಖೆಯಿಂದ ಯಾವುದೇ ಎನ್.ಓ.ಸಿ. ನೀಡಿರುವುದಿಲ್ಲ. ಸದರಿ ವಲಯದ ಪ್ರದೇಶದಲ್ಲಿ ಕಲ್ಲು ಗಣಿಗಾರಿಕೆ ಪರವಾನಿಗೆ ನವೀಕರಿಸಲು ಅರ್ಜಿಗಳು ಗಣಿ ಇಲಾಖೆ ಮತ್ತು ಕಂದಾಯ ಇಲಾಖೆಗೆ ಬಂದಿರುವ ಮೇರೆಗೆ ಕಂದಾಯ ಇಲಾಖೆ, ಗಣಿ ಇಲಾಖೆ ಹಾಗೂ ಅರಣ್ಯ ಇಲಾಖೆಗಳು ಜಂಟಿ ಮೋಜಿಣಿ